## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 11 (44)
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 15–07–2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಹಾಗೂ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಅತೀ ಕನಿಷ್ಠ ಮಾಸಿಕ ಸಂಭಾವನೆ ಪಡೆಯುತ್ತಿದ್ದು, ಇದರಿಂದ ಅವರ ಕುಟುಂಬದ ಪೋಷಣೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ನಿಯಮಗಳಲ್ಲಿ ಅವಕಾಶವಿಲ್ಲ.<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2024–25ನೇ ಶೈಕ್ಷಣಿಕ ಸಾಲಿನ ಅವಧಿಗೆ, ಮಂಜೂರಾದ ಬೋಧಕ ಹುದ್ದೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಒಟ್ಟು 4689 ಅತಿಥಿ ಉಪನ್ಯಾಸಕರ ಹುದ್ದೆಗಳನ್ನು ಮಾಸಿಕ ಸಂಭಾವನೆ ರೂ.12,000/– ಗಳಿಗೆ ತಾತ್ಕಾಲಿಕವಾಗಿ ನೇಮಿಸಿಕೊಳ್ಳಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ:ಇಪಿ 50 ಡಿಜಿಡಿ 2022 ದಿನಾಂಕ:05–07–2022ರಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಈ ಹಿಂದೆ ನೀಡಲಾಗುತ್ತಿದ್ದ ಮಾಸಿಕ ಗೌರವಧನ ರೂ.9,000/– ಗಳನ್ನು ಪರಿಷ್ಕರಿಸಿ ರೂ.12,000/–ಗಳಿಗೆ ಹೆಚ್ಚಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಅತಿಥಿ ಉಪನ್ಯಾಸಕರ ಮಾಸಿಕ ಸಂಭಾವನೆಯನ್ನು ಕನಿಷ್ಠ ರೂ.25,000ಕ್ಕೆ ಹೆಚ್ಚಿಸಿ, ಅವರ ಜೀವನ ನಿರ್ವಹಣೆಗೆ ಅನುಕೂಲ ಮಾಡಿಕೊಡುವ ಸಂಬಂಧ ಸರ್ಕಾರದ ಹಂತದಲ್ಲಿ ಚರ್ಚೆ ನಡೆಸಲಾಗಿದೆಯೇ; | ಇಂತಹ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿರುವುದಿಲ್ಲ. |
| ಇ) | ನಡೆದಿದ್ದಲ್ಲಿ, ಮಾಸಿಕ ಸಂಭಾವನೆಯನ್ನು ರೂ.25000ಕ್ಕೆ ಹೆಚ್ಚಳ ಮಾಡಲು ನಿಗದಿಪಡಿಸಿರುವ ಕಾಲಮಿತಿ ಎಷ್ಟು? | ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ಇಪಿ 217 ಡಿಜಿಡಬ್ಲ್ಯೂ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.